# All India Radio: Bangalore
# National Bulletins In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.07.2025 / 7.35 am**

<u>ಮುಖ್ಯಾಂಶಗಳು</u>

೧. ಇಂದಿನಿಂದ ಬ್ರಿಟನ್ ಹಾಗೂ ಮಾಲ್ಡೀವ್ಸ್ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

೨. ಕರ್ನಾಟಕದಲ್ಲಿ ಸಣ್ಣ ವ್ಯಾಪಾರಿಗಳಿಗೆ ತೆರಿಗೆ ನೋಟೀಸ್ ನೀಡುತ್ತಿರುವುದು ಕೇಂದ್ರವಲ್ಲ, ರಾಜ್ಯ ಸರ್ಕಾರ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಆಕಾಶವಾಣಿಗೆ ೯೦ ವರ್ಷಗಳ ಸಂಭ್ರಮ; ಇಂದು ರಾಷ್ಟ್ರೀಯ ಪ್ರಸಾರ ದಿನವಾಗಿ ಆಚರಣೆ

೪. ಮಹಿಳಾ ಏಕದಿನ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ೧೩ ರನ್‌ಗಳ ರೋಚಕ ಗೆಲುವು ಸಾಧಿಸಿದ ಭಾರತ

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಬ್ರಿಟನ್ ಹಾಗೂ ಮಾಲ್ಡೀವ್ಸ್‌ಗೆ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ ಪ್ರಧಾನಿ, ಬ್ರಿಟನ್‌ಗೆ ಭೇಟಿ ನೀಡಲಿದ್ದು, ಅಲ್ಲಿನ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿ ಮಾಡಲಿದ್ದಾರೆ. ಪ್ರಧಾನಿಯವರ ಪ್ರವಾಸದ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಟನ್ ಮತ್ತು ಭಾರತದ ಉದ್ಯಮ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಬ್ರಿಟನ್‌ಗೆ ಪ್ರಧಾನಿ ಕೈಗೊಳ್ಳುತ್ತಿರುವ ನಾಲ್ಕನೇ ಭೇಟಿ ಇದಾಗಿದೆ. ಬ್ರಿಟನ್‌ನ ಉಭಯ ನಾಯಕರೊಂದಿಗಿನ ಸಭೆಗಳು ಪ್ರಧಾನಿಯವರಿಗೆ ಭಾರತ-ಬ್ರಿಟನ್ ನಡುವಿನ ದ್ವಿಪಕ್ಷೀಯ ಸಂಬಂಧಗಳು ಹಾಗೂ ಅದನ್ನು ಬಲಪಡಿಸುವ ಕುರಿತಂತೆ ಪರಿಶೀಲನೆ ನಡೆಸಲು ಅವಕಾಶ ಕಲ್ಪಿಸುತ್ತದೆ. ಈ ಸಭೆಗಳು ವೇಳೆ ಪ್ರಧಾನಿ, ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ಸವಾಲುಗಳು ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದರು. ೨೦೨೧ರಲ್ಲಿ ಭಾರತ-ಬ್ರಿಟನ್ ಪಾಲುದಾರಿಕೆಯನ್ನು, ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಾಗಿ ಉನ್ನತೀಕರಿಸಲಾಗಿದ್ದು, ಈ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಉಭಯ ಕಡೆಯವರು ಬದ್ಧರಾಗಿದ್ದಾರೆ ಎಂದು ವಿಕ್ರಮ್ ಮಿಸ್ರಿ ಮಾಹಿತಿ ನೀಡಿದರು. ತಮ್ಮ ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ, ಇದೇ ೨೫ ರಿಂದ ಮಾಲ್ಡೀವ್ಸ್‌ಗೆ ಭೇಟಿ ನೀಡಲಿದ್ದಾರೆ. ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನ ಮೇರೆಗೆ ಇದೇ ೨೬ರಂದು ನಡೆಯಲಿರುವ ಮಾಲ್ಡೀವ್ಸ್‌ನ ೬೦ನೇ ಸ್ವಾತಂತ್ರ್ಯೋತ್ಸವ ವರ್ಷಾಚರಣೆಯಲ್ಲಿ ಗೌರವ ಅತಿಥಿಯವಾಗಿ ಪಾಲ್ಗೊಳ್ಳಲಿದ್ದಾರೆ. ಭೇಟಿಯ ವೇಳೆ ಪ್ರಧಾನಿ, ಅಧ್ಯಕ್ಷ ಮುಯಿಝು ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದು, ವಿವಿಧ ಮೂಲಸೌಕರ್ಯ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ.

<><*<><>*><>

ಕರ್ನಾಟಕದಲ್ಲಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ತೆರಿಗೆ ಬಾಕಿ ನೋಟಿಸ್ ನೀಡುತ್ತಿರುವುದು ರಾಜ್ಯ ಸರ್ಕಾರವೇ ಹೊರತು ಕೇಂದ್ರ ಸರ್ಕಾರವಲ್ಲ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ದೆಹಲಿಯಲ್ಲಿ ನಿನ್ನೆ ಹೇಳಿದ್ದಾರೆ. ರಾಜ್ಯ ಸರ್ಕಾರದ ತೆರಿಗೆ ಇಲಾಖೆ ಅಧಿಕಾರಿಗಳು ವ್ಯಾಪಾರಿಗಳಿಗೆ ನೋಟಿಸ್ ನೀಡುತ್ತಿದ್ದಾರೆ. ಇದೀಗ ರಾಜ್ಯ ಸರ್ಕಾರಕ್ಕೂ ಜಿಎಸ್‌ಟಿ ನೋಟಿಸ್‌ಗೂ ಸಂಬಂಧವಿಲ್ಲ ಎನ್ನುವ ಮೂಲಕ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಸರಿಯಲ್ಲ ಎಂದು ಹೇಳಿದ್ದಾರೆ. ಇದು ಕೇಂದ್ರದ ನಿರ್ಧಾರವೇ ಆಗಿದ್ದಲ್ಲಿ, ದೇಶದ ಎಲ್ಲ ರಾಜ್ಯಗಳಲ್ಲೂ ನೋಟಿಸ್ ವಿತರಣೆಯಾಗಬೇಕಾಗಿತ್ತು. ಆದರೆ ಬೇರೆ ಯಾವುದೇ ರಾಜ್ಯಗಳಲ್ಲೂ ಇಲ್ಲದ ಸಮಸ್ಯೆ ಕರ್ನಾಟಕದಲ್ಲಿ ಆಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರವೇ ಹೊಣೆ ಎಂದರು. ರಾಜ್ಯದಲ್ಲಿ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಜಿಎಸ್‌ಟಿ ನೋಟಿಸ್ ನೀಡುವ ಮೂಲಕ ಕೇಂದ್ರ ಸರ್ಕಾರದ ಡಿಜಿಟಲ್, ಯುಪಿಐ ವಹಿವಾಟು ಹದಗೆಡಿಸುವ ಹುನ್ನಾರ ರಾಜ್ಯ ಕಾಂಗ್ರೆಸ್ ಸರ್ಕಾರದ್ದಾಗಿದೆ. ಯುಪಿಐ ವಹಿವಾಟು ವಿಶ್ವಕ್ಕೆ ಮಾದರಿಯಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಈ ವಿಷಯದಲ್ಲಿ ರಾಜಕಾರಣ ಮಾಡುವುದು ಸರಿಯಲ್ಲ ಎಂದರು. ಈ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಧ್ಯಾಹ್ನ ಬೆಂಗಳೂರಿನಲ್ಲಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ತೆರಿಗೆ ನೋಟೀಸ್ ನೀಡಿರುವ ವಿಷಯಕ್ಕೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸಭೆ ಕರೆದಿದ್ದಾರೆ.

<><*<><>*><>

ಇಂದು, 'ರಾಷ್ಟ್ರೀಯ ಪ್ರಸಾರ ದಿನ'. 'ಬಹುಜನ ಹಿತಾಯ, ಬಹುಜನ ಸುಖಾಯ' ಧ್ಯೇಯದೊಂದಿಗೆ, ಆಕಾಶವಾಣಿ ಜುಲೈ ೨೩ನ್ನು, ರಾಷ್ಟ್ರೀಯ ಪ್ರಸಾರ ದಿನವನ್ನಾಗಿ ಆಚರಿಸುತ್ತದೆ. ಸುದ್ದಿ, ಮಾಹಿತಿ, ಮನೋರಂಜನೆಯೊಂದಿಗೆ, ಸಮಷ್ಟಿ ಹಿತದ ಕಾಯಕದಲ್ಲಿ ಆಕಾಶವಾಣಿ ತೊಡಗಿದೆ. ಸಾರ್ವಜನಿಕ ಹಿತದ ರಾಷ್ಟ್ರೀಯ ಪ್ರಸಾರ ಮಾಧ್ಯಮವಾಗಿದೆ. ಭಾರತದಲ್ಲಿ ಮೊಟ್ಟ ಮೊದಲ ಬಾರಿಗೆ, ೧೯೨೩ ರ ಜೂನ್‌ನಲ್ಲಿ, ಬಾಂಬೆ ರೇಡಿಯೋ ಕ್ಲಬ್‌ನಿಂದ, ಪ್ರಥಮ ಬಾನುಲಿ ಪ್ರಸಾರ ಸೇವೆ, ಪ್ರಾರಂಭವಾಯಿತು. ತರುವಾಯ ೧೯೨೭ರ ಜುಲೈ ೨೩ ರಂದು, ಇಂಡಿಯನ್ ಬ್ರಾಡ್‌ಕಾಸ್ಟಿಂಗ್ ಕಾರ್ಪೋರೇಷನ್  ಸ್ಥಾಪನೆಯಾಯಿತು. ೮ನೇ ಜೂನ್, ೧೯೩೬ರಲ್ಲಿ ಆಲ್ ಇಂಡಿಯಾ ರೇಡಿಯೋ ಆಕಾಶವಾಣಿ, ಪ್ರಸಾರ ಸೇವೆ ಆರಂಭಿಸಿ, ಇದೀಗ ಸಾರ್ಥಕ ೯೦ ವರ್ಷಗಳು. ರಾಷ್ಟ್ರೀಯ ಪ್ರಸಾರ ದಿನದ ಅಂಗವಾಗಿ ಆಕಾಶವಾಣಿ ಅರ್ಥಪೂರ್ಣವಾಗಿ, ವಿಶೇಷ ಕಾರ್ಯಕ್ರಮಗಳೊಂದಿಗೆ, ಇಂದು ಸಂಭ್ರಮದಿಂದ ಆಚರಿಸುತ್ತಿದೆ.

<><*<><>*><>

ಭಾರತೀಯ ನೌಕಾಪಡೆಯು, ಇಂದು ನವದೆಹಲಿಯಲ್ಲಿ ಒಂದು ದಿನದ ಹಡಗು ನಿರ್ಮಾಣ ವಿಚಾರ ಸಂಕಿರಣವನ್ನು ಆಯೋಜಿಸುತ್ತಿದೆ.  ಹಡಗು ನಿರ್ಮಾಣದ ಮೂಲಕ ರಾಷ್ಟ್ರ ನಿರ್ಮಾಣದ ಕುರಿತಾದ ವಿಚಾರ ಸಂಕಿರಣ ಇದಾಗಿದ್ದು, ಭಾರತೀಯ ನೌಕಾಪಡೆ, ಹಡಗು ನಿರ್ಮಾಣ ಕೇಂದ್ರಗಳು, ಕೈಗಾರಿಕೆಗಳು, ಶೈಕ್ಷಣಿಕ ಸಂಸ್ಥೆಗಳು ಹಾಗೂ ಸರ್ಕಾರದ ಪ್ರಮುಖ ಪಾಲುದಾರರನ್ನು ಒಗ್ಗೂಡಿಸುತ್ತದೆ.  ಈ ಕಾರ್ಯಕ್ರಮವು, ಹಡಗು ನಿರ್ಮಾಣಕ್ಕೆ ಸಂಬಂಧಿಸಿದ ವಿವಿಧ ನೀತಿ ಅಂಶಗಳ ಕುರಿತು ಒಗ್ಗಟ್ಟಿನ ಮತ್ತು ಪ್ರಗತಿ-ಆಧಾರಿತ ಚರ್ಚೆಗಳಿಗೆ ಅವಕಾಶ ಕಲ್ಪಿಸಲಿದೆ.

<><*<><>*><>

೨೦೨೭ರ ಜನಗಣತಿಗೆ ಸಿದ್ಧತೆಗಳು ಅಧಿಕೃತವಾಗಿ ಆರಂಭಗೊಂಡಿದ್ದು, ಕಳೆದ ತಿಂಗಳ ೧೬ ರಂದು ಗೆಜೆಟ್ ಅಧಿಸೂಚನೆ ಹೊರಡಿಸುವ ಮೂಲಕ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಗೆ ನಿನ್ನೆ ಲಿಖಿತ ಉತ್ತರ ನೀಡಿರುವ ಕೇಂದ್ರ ಗೃಹ ವ್ಯವಹಾರಗಳ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಜನಗಣತಿ ಸಂಬಂಧ ಜುಲೈ ೩ ಹಾಗೂ ೪ ರಂದು ನವದೆಹಲಿಯಲ್ಲಿ ಎರಡು ದಿನಗಳ ಸಮ್ಮೇಳನ ಆಯೋಜಿಸಲಾಗಿತ್ತು. ಈ ಸಮ್ಮೇಳನದಲ್ಲಿ ಜನಗಣತಿ ಕಾರ್ಯಾಚರಣೆಯ ನಿರ್ದೇಶಕರು, ಜನಗಣತಿ ನಿರ್ದೇಶನಾಲಯದ ಹಿರಿಯ ಅಧಿಕಾರಿಗಳು ಹಾಗೂ ಜನಗಣತಿ ಆಯುಕ್ತರ ಕಾರ್ಯಾಲಯದ ಅಧಿಕಾರಿಗಳು ಭಾಗವಹಿಸಿದ್ದರು ಎಂದು ಮಾಹಿತಿ ನೀಡಿದ್ದಾರೆ. ಈ ವೇಳೆ, ಜನಗಣತಿ ಹಾಗೂ ಸಂಬಂಧಿತ ಚಟುವಟಿಕೆಗಳ ಕುರಿತು ಮಾರ್ಗಸೂಚಿ ಮತ್ತು ದತ್ತಾಂಶ ಸಂಗ್ರಹಣೆ, ನಿರ್ವಹಣೆ, ಆಡಳಿತ ಘಟಕಗಳ ಚೌಕಟ್ಟು ಅಂತಿಮಗೊಳಿಸುವುದು, ಜನಗಣತಿ ಸಿಬ್ಬಂದಿ ತರಬೇತಿ ಸೇರಿದಂತೆ ಇತರ ಕಾರ್ಯಗಳ ಬಗ್ಗೆ ಚರ್ಚೆ ನಡೆಸಲಾಯಿತು. ಜನಗಣತಿ ಕಾರ್ಯಗಳಿಗೆ ತಂತ್ರಜ್ಞಾನ ಆಧಾರಿತ ನವೀನ ವಿಧಾನಗಳನ್ನು ಜಾರಿಗೆ ತರುವ ಉದ್ದೇಶದಿಂದ ಈ ಸಮ್ಮೇಳನ ನಡೆಸಲಾಯಿತು ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

<><*<><>*><>

ದೇಶವಾಸಿಗಳಿಗೆ ಮಾತ್ರ ಮತದಾನದ ಹಕ್ಕು ಇದ್ದು, ಮತದಾರರ ಪಟ್ಟಿ ಪರಿಷ್ಕರಣೆ ಮಾಡಿದರೆ ಪ್ರತಿಪಕ್ಷಗಳಿಗೆ ಯಾಕೆ ಸಮಸ್ಯೆಯಾಗುತ್ತದೆ ಎಂದು ಬಿಜೆಪಿ ಹಿರಿಯ ಮುಖಂಡ ಹಾಗೂ ಸಂಸದ ರವಿಶಂಕರ್ ಪ್ರಸಾದ್ ಪ್ರಶ್ನಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಹಾರದ ಅರಾರಿಯಾ, ಊರ್ನಿಯಾ ಮತ್ತು ಕಿಶನ್ ಗಂಜ್ ನಲ್ಲಿ ಜನಸಂಖ್ಯೆಗಿಂತ ಶೇಕಡ ೨೫ರಷ್ಟು ಹೆಚ್ಚು ಆಧಾರ್ ಕಾರ್ಡ್ ಗಳನ್ನು ವಿತರಿಸಲಾಗಿದೆ. ಇವರಲ್ಲಿ ಬಹುತೇಕರು ಹೊರಗಿನವರಾಗಿದ್ದಾರೆ ಎಂದು ಚುನಾವಣಾ ಆಯೋಗ ಹೇಳಿದೆ ಎಂದರು.

<><*<><>*><>

ಭಾರತೀಯ ಸೇನೆಗಾಗಿ ಮೊದಲ ಸುತ್ತಿನ ಅಪಾಚೆ ಹೆಲಿಕ್ಯಾಪ್ಟರ್‌ಗಳು, ಭಾರತದ ಭದ್ರತಾ ಸಾಮರ್ಥ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.    ಈ ಅತ್ಯಾಧುನಿಕ ಹೆಲಿಕಾಪ್ಟರ್‌ಗಳು ಭಾರತೀಯ ಸೇನೆಯ, ವಾಯುಯಾನ ವಿಭಾಗದ ಪರಿಣಾಮಕಾರಿ ಕಾರ್ಯನಿರ್ವಹಣೆಯನ್ನು ಬಲಪಡಿಸಲಿದೆ. ಭಾರತದ ಸಶಸ್ತ್ರಪಡೆಗಳನ್ನು ಆಧುನೀಕರಿಸುವ ಕುರಿತಂತೆ ಸರ್ಕಾರದ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತದೆ ಎಂದು ರಕ್ಷಣಾ ಸಚಿವರು ತಿಳಿಸಿದ್ದಾರೆ.

<><*<><>*><>

ಅಂತಾರಾಷ್ಟ್ರೀಯ ವಿವಾದಗಳ ಶಾಂತಿಯುತ ಇತ್ಯರ್ಥಕ್ಕೆ ಕಾರ್ಯವಿಧಾನಗಳನ್ನು ಬಲಪಡಿಸಲು ವಿಶ್ವಸಂಸ್ಥೆ ಭದ್ರತಾ ಮಂಡಳಿ ನಿರ್ಣಯ ಅಂಗೀಕರಿಸಿದೆ.  ೧೫ ಸದಸ್ಯರ ಭದ್ರತಾ ಮಂಡಳಿಯು, ಸರ್ವಾನುಮತದಿಂದ

ನಿರ್ಣಯ ಅಂಗೀಕರಿಸಿದೆ. ಎಲ್ಲಾ ವಿಶ್ವಸಂಸ್ಥೆ ಸದಸ್ಯ ರಾ?ಗಳು ಮಾತುಕತೆ, ವಿಚಾರಣೆ, ಮಧ್ಯಸ್ಥಿಕೆ, ರಾಜಿ, ಮಧ್ಯಸ್ಥಿಕೆ, ನ್ಯಾಯಾಂಗ ಇತ್ಯರ್ಥ, ಪ್ರಾದೇಶಿಕ ಸಂಸ್ಥೆಗಳು ಅಥವಾ ವ್ಯವಸ್ಥೆಗಳನ್ನು ಆಶ್ರಯಿಸುವುದು ಅಥವಾ ತಮ್ಮದೇ ಆದ ಆಯ್ಕೆಯ ಇತರ ಶಾಂತಿಯುತ ವಿಧಾನಗಳನ್ನು ಒಳಗೊಂಡಂತೆ ವಿಶ್ವಸಂಸ್ಥೆಯ ಚಾರ್ಟರ್‌ನ ೩೩ನೇ ವಿಧಿಯಲ್ಲಿ ವಿವರಿಸಿರುವ ಕಾರ್ಯವಿಧಾನಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಂತೆ ತಿಳಿಸಲಾಗಿದೆ ಎಂದು ವರದಿಯಾಗಿದೆ.

**<><*<><>*><>**

ಚೆಸ್ಟರ್-ಲೆ-ಸ್ಟ್ರೀಟ್‌ನಲ್ಲಿ ನಿನ್ನೆ ನಡೆದ ಮಹಿಳಾ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ, ಮೂರನೇ ಹಾಗೂ ಕೊನೆಯ ಪಂದ್ಯದಲ್ಲಿ ಭಾರತ, ಇಂಗ್ಲೆಂಡ್ ತಂಡವನ್ನು ೧೩ ರನ್‌ಗಳಿಂದ ಸೋಲಿಸಿ ಸರಣಿಯನ್ನು ೨-೧ ಅಂತರದಿಂದ ಗೆದ್ದಿದೆ. ಟಾಸ್ ಗೆದ್ದು, ಬ್ಯಾಟಿಂಗ್ ಮಾಡಿದ ಭಾರತ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೫ ವಿಕೆಟ್‌ಗಳಿಗೆ ೩೧೮ ರನ್‌ಗಳ ಬೃಹತ್ ಮೊತ್ತ ಗಳಿಸಿತು. ಆತಿಥೇಯರಿಗೆ ೩೧೯ ರನ್‌ಗಳ ಸವಾಲಿನ ಗುರಿ ನೀಡಿತು. ಇಂಗ್ಲೆಂಡ್ ತಂಡ ೪೯.೫ ಓವರ್‌ಗಳಲ್ಲಿ ೩೦೫ ರನ್ ಗಳಿಸಿ ಪರಾಭವಗೊಂಡಿತು. ಭಾರತ ತಂಡದ ನಾಯಕಿ ಹರ್ಮನ್‌ಪ್ರೀತ್ ೮೪ ಎಸೆತಗಳಲ್ಲಿ ಅಮೋಘ ೧೦೨ ರನ್ ಗಳಿಸಿದರು. ಕ್ರಾಂತಿ ಗೌಡ್ ಆರು ವಿಕೆಟ್‌ಗಳನ್ನು ಪಡೆದು ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿದರು. ಅತ್ಯುತ್ತಮ ಪ್ರದರ್ಶನ ನೀಡಿದ ಹರ್ಮನ್‌ಪ್ರೀತ್ ಅವರು ಪಂದ್ಯಶ್ರೇಷ್ಠ ಮತ್ತು ಸರಣಿ ಶ್ರೇಷ್ಠ ಪುರಸ್ಕಾರಕ್ಕೆ ಭಾಜನರಾದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**